ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮಹದಾಯಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 28/02/2020

# ಕರ್ನಾಟಕಕ್ಕೆ ಮಹದಾಯಿ ಗೆಲುವು

ಉ.ವಾ. 28-2-20

## ಗೆಜೆಟ್ ಅಧಿಸೂಚನೆ ಹೊರಡಿಸಿದ ಕೇಂದ್ರ ಸರ್ಕಾರ

**ನವದೆಹಲಿ:** ಮಹದಾಯಿ ನದಿ ನೀರು ಹಂಚಿಕೆ ಸಂಬಂಧ ಕೇಂದ್ರ ಸರ್ಕಾರ ಗೆಜೆಟ್ ಅಧಿಸೂಚನೆ ಹೊರಡಿಸಿದೆ. ಗುರುವಾರ ರಾತ್ರಿ ವೇಳೆಗೆ ಈ ಪ್ರಕಟಣೆ ಹೊರಬಿದ್ದಿದೆ.

ಅಂತಿಮ ಅಧಿಸೂಚನೆ ಹೊರಡಿಸುವಂತೆ ಕರ್ನಾಟಕ ಸಲ್ಲಿಸಿದ್ದ ಅರ್ಜಿಯನ್ನು ಮಾನ್ಯ ಮಾಡಿದ್ದ ಸುಪ್ರೀಂಕೋರ್ಟ್, ಫೆ.20ರಂದು ಅಧಿಸೂಚನೆ ಹೊರಡಿಸಬಹುದು ಎಂದು ಆದೇಶ ನೀಡಿತ್ತು. ಹೀಗಾಗಿ, ಕೇಂದ್ರ ಜಲ ಶಕ್ತಿ ಸಚಿವಾಲಯ ಅಧಿಸೂಚನೆ ಹೊರಡಿಸಿದೆ.

ಕರ್ನಾಟಕದ ಅರ್ಜಿ ಸಂಬಂಧ ಸುಪ್ರೀಂ ಕೋರ್ಟ್, ಗೋವಾದ ಅಭಿಪ್ರಾಯ ಕೇಳಿದ್ದು, ಆ ರಾಜ್ಯದ ವಕೀಲರು ಅಧಿಸೂಚನೆ ಹೊರಡಿಸಲು ಅಡ್ಡಿ ಇಲ್ಲ ಎಂದಿದ್ದರು. ಹೀಗಾಗಿ ಸುಪ್ರೀಂಕೋರ್ಟ್ ಅಂತಿಮ ತೀರ್ಪಿಗೆ ಬದ್ಧವಾಗಿ ಅಧಿಸೂಚನೆ ಹೊರಡಿಸಬಹುದು ಎಂದಿತ್ತು.

ಈಗ ಅಧಿಸೂಚನೆ ಹೊರಟಿರುವ ಹಿನ್ನೆಲೆಯಲ್ಲಿ ಕರ್ನಾಟಕಕ್ಕೆ 13.42 ಟಿಎಂಸಿ ನೀರು ಲಭ್ಯವಾಗಲಿದೆ. ಜತೆಗೆ ಗೋವಾಗೆ 24 ಟಿಎಂಸಿ ಮತ್ತು ಮಹಾರಾಷ್ಟ್ರಕ್ಕೆ 1.33 ಟಿಎಂಸಿ ನೀರು ಸಿಗಲಿದೆ. ಈ ಮಧ್ಯೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಪ್ರಧಾನಿ ಮೋದಿ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ.